# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕರ್ನಾಟಕ ಗ್ಯಾಸೆಟಿಯರ್ ಇಲಾಖೆಯ 2012-13ನೇ ಸಾಲಿನ ವಾರ್ಷಿಕ ಕ್ರಿಯಾಯೋಜನೆಗೆ ಅನುಮೋದನೆ ನೀಡುವ ಬಗ್ಗೆ.

ಓದಲಾಗಿದೆ: 1) ಸರ್ಕಾರಿ ಆದೇಶ ಸಂಖ್ಯೆ ಕಸಂವಾಪ್ರ 38 ಕೆಒಎಲ್ 2012, ದಿನಾಂಕ: 12.04.2012.

2) ಪತ್ರ ಸಂಖ್ಯೆ: ಕಗ್ಯಾಇ/ವಾ.ಕ್ರಿ.ಯೋ/2012-13, ದಿನಾಂಕ: 28.03.2012

ಪ್ರಸ್ತಾವನೆ:

ಕರ್ನಾಟಕ ಗ್ಯಾಸೆಟಿಯರ್ ಇಲಾಖೆಯ 2011-12 ನೇ ಸಾಲಿನ ಯೋಜನಾ ಕಾರ್ಯಕ್ರಮಗಳನ್ನು 2012-13ನೇ ಸಾಲಿನಲ್ಲಿ ಮುಂದುವರೆಸಲು ಮೇಲೆ (1)ರಲ್ಲಿ ಓದಲಾದ ಆದೇಶದಲ್ಲಿ ಸರ್ಕಾರದ ಮಂಜೂರಾತಿಯನ್ನು ನೀಡಲಾಗಿದೆ.

ಕರ್ನಾಟಕ ಗ್ಯಾಸೆಟಿಯರ್ ಇಲಾಖೆಯ 2012-13 ನೇ ಸಾಲಿನ ವಾರ್ಷಿಕ ಕ್ರಿಯಾ ಯೋಜನೆ ಕಾರ್ಯಕ್ರಮಗಳಿಗೆ ಅನುಮೋದನೆ ನೀಡುವಂತೆ ಮುಖ್ಯ ಸಂಪಾದಕರು, ಕರ್ನಾಟಕ ಗ್ಯಾಸೆಟಿಯರ್ ಇಲಾಖೆ, ಇವರು ಮೇಲೆ (2) ರಲ್ಲಿ ಓದಲಾದ ಪತ್ರದಲ್ಲಿ ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿದೆ, ಅದರಂತೆ ಈ ಕೆಳಕಂಡ ಆದೇಶ.

ಆದೇಶ ಸಂಖ್ಯೆ: ಕಸಂವಾ 7 ಕರಾಗೆ 2012

ಬೆಂಗಳೂರು, ದಿನಾಂಕ: 04.05.2012

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಕರ್ನಾಟಕ ಗ್ಯಾಸೆಟಿಯರ್ ಇಲಾಖೆಗೆ ಸಂಬಂಧಿಸಿದಂತೆ 2012-13 ನೇ ಸಾಲಿನಲ್ಲಿ ಹಮ್ಮಿಕೊಳ್ಳಲಾದ ಮುಂದುವರೆದ ಯೋಜನಾ ಕಾರ್ಯಕ್ರಮಗಳಿಗೆ ಅನುಬಂಧದಲ್ಲಿ ಸೂಚಿಸಿರುವಂತೆ ಈ ಕೆಳಕಂಡ ಷರತ್ತುಗಳೊಂದಿಗೆ ತಾತ್ವಿಕ ಅನುಮೋದನೆಯನ್ನು ನೀಡಲಾಗಿದೆ.

## ಷರತ್ತುಗಳು

1. ಹೊಸ ಯೋಜನೆಗಳಿಗೆ, ಮುಂದುವರಿದ ಯೋಜನಾ ಕಾರ್ಯಕ್ರಮಗಳಲ್ಲಿ ಹೊಸ ಘಟಕಗಳ ಹಾಗೂ ಹುದ್ದೆಗಳ ಸೃಜನೆ ಇದ್ದಲ್ಲಿ ಪ್ರತ್ಯೇಕವಾಗಿ ಮಂಜೂರಾತಿಯನ್ನು ಪಡೆಯುವುದು.
2. ಮುಂದುವರೆದ ಯೋಜನೆಗಳನ್ನು ಕಾರ್ಯಗತಗೊಳಿಸುವ ಸಂದರ್ಭದಲ್ಲಿ ಸರ್ಕಾರದ ಆದೇಶ ಸಂಖ್ಯೆ ಎಫ್‌ಡಿ 2 ಟಿಎಫ್‌ಪಿ 2010, ದಿನಾಂಕ: 30.04.2010ರಲ್ಲಿ ಇಲಾಖಾ ಮುಖ್ಯಸ್ಥರಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸುವುದು.
3. ಆರ್ಥಿಕ ಇಲಾಖೆಯ ಮಿತವ್ಯಯ ಆದೇಶಗಳಿಗೆ ಒಳಪಡುವ ಸಿಬ್ಬಂದಿ ಸೃಜನೆ, ವಾಹನ ಮತ್ತು ಯಂತ್ರ ಸಾಮಗ್ರಿ ಖರೀದಿ, ಹೊಸ ಕಛೇರಿ ತೆರೆಯುವುದು, ಹೊಸ ಯೋಜನೆಗಳಿಗೆ ಮಂಜೂರಾತಿ, ಇವುಗಳಿಗೆ ಪ್ರತ್ಯೇಕವಾಗಿ ಆರ್ಥಿಕ ಇಲಾಖೆಯ ಹಾಗೂ ಯೋಜನಾ ಇಲಾಖೆಯ ಅನುಮೋದನೆಯನ್ನು ಪಡೆಯಲು ಪ್ರಸ್ತಾವನೆಗಳನ್ನು ಸಲ್ಲಿಸುವುದು.
4. ಕಾರ್ಯಕ್ರಮಗಳನ್ನು ಕಾರ್ಯಗತಗೊಳಿಸಲು ಜವಾಬ್ದಾರರಾದ ಅಧಿಕಾರಿಗಳು ಅವರಿಗೆ ನೀಡಲಾದ ಆರ್ಥಿಕ ಅಧಿಕಾರಕ್ಕೆ ಒಳಪಟ್ಟು ಯೋಜನಾ ಕಾರ್ಯಕ್ರಮಗಳನ್ನು ಕಾರ್ಯರೂಪಕ್ಕೆ ತರತಕ್ಕದ್ದು.

5. 1999ರ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕತೆ ಅಧಿನಿಯಮವನ್ನು ಹಾಗೂ ನಿಯಮಗಳು 2000 ವನ್ನು ಕಡ್ಡಾಯವಾಗಿ ಪಾಲಿಸುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯು ಆದೇಶ ಸಂಖ್ಯೆ: ಎಫ್‌ಡಿ 1 ಟಿಎಫ್‌ಪಿ 96 ದಿನಾಂಕ: 10.07.1996ರಲ್ಲಿ ಇಲಾಖಾ ಕಾರ್ಯದರ್ಶಿಯವರಿಗೆ ಪ್ರದತ್ತವಾದ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

ಎನ್ ಗೀತಾಕುಮಾರಿ
(ಎನ್.ಗೀತಾಕುಮಾರಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಇಲಾಖೆ
(ಆಡಳಿತ ಕನ್ನಡ)

**ಇವರಿಗೆ :-**

1) ಮಹಾಲೇಖಪಾಲರು (ಎ&ಇ) ಕರ್ನಾಟಕ, ಬೆಂಗಳೂರು
2) ಮುಖ್ಯ ಸಂಪಾದಕರು ಕರ್ನಾಟಕ ಗ್ಯಾಸೆಟಿಯರ್ ಇಲಾಖೆ, ಕಾವೇರಿ ಭವನ, ಬೆಂಗಳೂರು.
3) ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
4) ನಿರ್ದೇಶಕರು, ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ, ವಿಕಾಸಸೌಧ, ಬೆಂಗಳೂರು. ಇವರಿಗೆ 10 ಪ್ರತಿಗಳು
5) ಮಾನ್ಯ ಕನ್ನಡ ಮತ್ತು ಸಂಸ್ಕೃತಿ ಹಾಗೂ ಸಣ್ಣ ನೀರಾವರಿ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ ಮಾಹಿತಿಗಾಗಿ.
6) ಆಂತರಿಕ ಆರ್ಥಿಕ ಸಲಹೆಗಾರರು, ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಮತ್ತು ಪ್ರವಾಸೋದ್ಯಮ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
7) ಸರ್ಕಾರದ ಉಪಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
8) ನಿರ್ದೇಶಕರು ಜನಶಕ್ತಿ ಮತ್ತು ಉದ್ಯೋಗ ವಿಭಾಗ, ಯೋಜನಾ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
9) ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-7), ವಿಧಾನ ಸೌಧ, ಬೆಂಗಳೂರು.
10) ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಇಲಾಖೆ, ವಿಕಾಸ ಸೌಧ, ಬೆಂಗಳೂರು.
11) ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಇಲಾಖೆ, ವಿಕಾಸ ಸೌಧ, ಬೆಂಗಳೂರು
12) ಸಮನ್ವಯ ಶಾಖೆ/ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

**ಸರ್ಕಾರದ ಆದೇಶ ಸಂಖ್ಯೆ: ಕಸಂವಾ 7 ಕರಾಗೆ 2012, ಬೆಂಗಳೂರು, ದಿನಾಂಕ: 04.05.2012ಕ್ಕೆ ಅನುಬಂಧ**

**2012-13ನೇ ಸಾಲಿನ ಮುಂದುವರೆದ ಯೋಜನಾ ಕಾರ್ಯಕ್ರಮಗಳ ಘೋಷ್ವಾರೆ.**

| ಕ್ರಮಸಂಖ್ಯೆ | ಲೆಕ್ಕಶೀರ್ಷಿಕೆ | ಯೋಜನೇತರ | ಯೋಜನೆ |
|---|---|---|---|
| 1. | 3454-02-110-0-01-059 ಜಿಲ್ಲಾ ಗ್ಯಾಸೆಟಿಯರ್‌ಗಳ ಪರಿಷ್ಕರಣೆ - (Revision of District Gazetteer) | | 17.27 |
| ಅ) 422 | ವಿಶೇಷ ಘಟಕ ಯೋಜನೆ | | 0.80 |
| ಆ) 423 | ಗಿರಿಜನ ಉಪಯೋಜನೆ | | 1.93 |
| 2. | 3454-02-110-0-02 ಯೋಜನೆ ಸಾಮಗ್ರಿ ಮತ್ತು ಸರಬರಾಜು | ಇಲ್ಲ | |
| | ಒಟ್ಟು | | 20.00 |

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎನ್.ಗೀತಾಕುಮಾರಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಇಲಾಖೆ
(ಆಡಳಿತ ಕನ್ನಡ)

**ಸರ್ಕಾರದ ಆದೇಶ ಸಂಖ್ಯೆ: ಕಸಂವಾ 7 ಕರಾಗೆ 2012, ಬೆಂಗಳೂರು, ದಿನಾಂಕ: 04.05.2012ಕ್ಕೆ ಅನುಬಂಧ**

# ಕರ್ನಾಟಕ ಗ್ಯಾಸೆಟಿಯರ್ ಇಲಾಖೆ

**2012-13ನೇ ಸಾಲಿನ ಮುಂದುವರೆದ ಯೋಜನಾ ಕಾರ್ಯಕ್ರಮಗಳ ಘೋಷ್ವಾರೆ.**

| ಕ್ರ.ಸಂ. | ಲೆಕ್ಕಶೀರ್ಷಿಕೆ | ಹಮ್ಮಿಕೊಳ್ಳಲಾದ ಉದ್ದೇಶಿತ ಕಾರ್ಯಕ್ರಮಗಳು | ಆಯವ್ಯಯದಲ್ಲಿ ಒದಗಿಸಲಾದ ಅನುದಾನ |
|---|---|---|---|
| 1) | 3454-02-110-0-01 ಯೋಜನೆ) ಜಿಲ್ಲಾ ಗ್ಯಾಸೆಟಿಯರ್‌ಗಳ ಪರಿಷ್ಕರಣೆ, ಸಂಪಾದನೆ, ಮುದ್ರಣ ಹಾಗೂ ಪ್ರಕಟಣೆ | ಕರ್ನಾಟಕ ಕೈಪಿಡಿ 2012 ಮುದ್ರಣ | 9.00 |
| | | ದಿ ಹ್ಯಾಂಡ್ ಬುಕ್ ಆಫ್ ಕರ್ನಾಟಕ, ಮರುಮುದ್ರಣ | 2.50 |
| | | ಗ್ಲಿಂಪ್ಸಸ್ ಆಫ್ ಕರ್ನಾಟಕ, ಕನ್ನಡ ಭಾಷಾಂತರ | 1.00 |
| | | ರಾಜ್ಯ ಗ್ಯಾಸೆಟಿಯರ್- ಅಧ್ಯಾಯಗಳ ಪರಿಷ್ಕರಣೆ | 0.50 |
| | | ಕೊಪ್ಪಳ ಜಿಲ್ಲೆಯ ತಾಲ್ಲೂಕು ಗ್ಯಾಸೆಟಿಯರ್ ಅಧ್ಯಾಯಗಳ ರಚನೆ | 0.77 |
| | | ಮುಂದುವರೆದ ಯೋಜನೆಗಳಿಗಾಗಿ ಅಂತಿಮ ಬಿಲ್ ಪಾವತಿ | 2.50 |
| | | ಇ-ಆಡಳಿತ | 1.00 |
| | | ವಿಶೇಷ ಘಟಕ ಯೋಜನೆ- ಪರಿಶಿಷ್ಟಜಾತಿ ಮತ್ತು ಪರಿಶಿಷ್ಟ ಪಂಗಡದವರ ಜನಸಂಖ್ಯಾ ಅಧ್ಯಯನ | 0.80 |
| | | ಗಿರಿಜನ ಉಪಯೋಜನೆ-ಗಿರಿಜನರ ಜನಸಂಖ್ಯಾ ಅಧ್ಯಯನ. | 1.93 |
| | | | **20.00** |

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

ಎನ್ ಗೀತಾಕುಮಾರಿ
(ಎನ್.ಗೀತಾಕುಮಾರಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಇಲಾಖೆ
(ಆಡಳಿತ ಕನ್ನಡ)